ವಿಷಯ:- ವೃತ್ತಿ ಶಿಕ್ಷಣ ಕಾಲೇಜುಗಳಲ್ಲಿ ರ್‍ಯಾಗಿಂಗ್

12(68)

ಶ್ರೀ ರಾಮಲಿಂಗರೆಡ್ಡಿ (ಜಯನಗರ):- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ರಾಜ್ಯದಲ್ಲಿರುವ ವೃತ್ತಿ ಶಿಕ್ಷಣ ಕಾಲೇಜುಗಳಲ್ಲಿ ನಡೆಯುತ್ತಿರುವ ರ್‍ಯಾಗಿಂಗ್ ಹಾವಳಿಯನ್ನು ತಡೆಗಟ್ಟಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು;

ಆ) ಇದಕ್ಕೆ ಸಂಬಂಧಪಟ್ಟ ಪ್ರತ್ಯೇಕ ಕಾನೂನು ಜಾರಿಗೆ ತರಲು ಸರ್ಕಾರದವರು ಪರಿಶೀಲಿಸುವರೆ?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು):-

ಅ) 1983ರ ಕರ್ನಾಟಕ ಶಿಕ್ಷಣ ಅಧಿನಿಯಮದ 116ನೇ ಪ್ರಕರಣದಲ್ಲಿ ರ್‍ಯಾಗಿಂಗ್‌ನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಸದರಿ ಅಧಿನಿಯಮದ 2(29)ನೇ ಪ್ರಕರಣದಲ್ಲಿ ರ್‍ಯಾಗಿಂಗ್ ಪದವನ್ನು ವ್ಯಾಖ್ಯಾನಿಸಲಾಗಿದೆ. 137ನೇ ಪ್ರಕರಣದ ರೀತ್ಯ ಸದರಿ ಅಪರಾಧವನ್ನು ನ್ಯಾಯಾಲಯವು ಸಂಜ್ಞೆಯಗೊಳಿಸಲಾಗಿದೆ. ಪೋಲೀಸ್ ನಿರೀಕ್ಷಕರ ಮಟ್ಟಕ್ಕಿಂತಲೂ ಹೆಚ್ಚಿನ ಅಧಿಕಾರಿಗಳು ಅಂತಹ ಅಪರಾಧದ ತನಿಖೆ ನಡೆಸಬೇಕಾಗಿದೆ. ಈ ಉಪಬಂಧಕ್ಕೆ ಪೂರಕವಾಗಿ ದಿನಾಂಕ 16-1-97 ಸಂ: ಇಡಿ 122 ಯುಆರ್‌ಸಿ 96ರ ಸುತ್ತೋಲೆಯನ್ನು ಹೊರಡಿಸಲಾಗಿದೆ.

ವಿಷಯ:- ರಾಜ್ಯದಲ್ಲಿರುವ ಖಾಸಗೀ ಮತ್ತು ಸರ್ಕಾರಿ ವೈದ್ಯಕೀಯ ಕಾಲೇಜುಗಳು.

14(62)

ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ):- ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ರಾಜ್ಯದಲ್ಲಿ ಖಾಸಗೀ ಮತ್ತು ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು).

ಆ) ವೈದ್ಯಕೀಯ ಕಾಲೇಜುಗಳಿಗೆ ಸಂಬಂಧಿಸಿದಂತೆ ಭಾರತೀಯ ವೈದ್ಯಕೀಯ ಮಂಡಳಿಯವರು ರೂಪಿಸಿರುವ ಮಾನದಂಡಗಳೇನು;

ಇ) ಈ ಮಾನದಂಡಗಳಿಗೆ ಅನುಗುಣವಾಗಿಲ್ಲದ ಕಾಲೇಜುಗಳ ಸಂಖ್ಯೆ ಎಷ್ಟು? (ವಿವರ ನೀಡುವುದು).

ಡಾ: ಎಂ. ಶಂಕರ್ ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು):-